**National**
**Kannada**
**28.02.2026 7.35 pm**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಗುಜರಾತ್‌ನಲ್ಲಿಂದು ಸೆಮಿಕಂಡಕ್ಟರ್ ಘಟಕ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ

೨. ಸಶಸ್ತ್ರ ಪಡೆಗಳ ಸಿಬ್ಬಂದಿಯ ಸೇವಾ ನಿಯಮ ಮರು ಪರಿಶೀಲಿಸಲು ತಜ್ಞರ ಸಮಿತಿ ರಚನೆಗೆ ಸುಪ್ರೀಂಕೋರ್ಟ್ ಸಲಹೆ

೩. ಇಸ್ರೇಲ್-ಇರಾನ್ ನಡುವೆ ಉದ್ವಿಗ್ನತೆ; ಮಧ್ಯಪ್ರಾಚ್ಯ ರಾಷ್ಟ್ರಗಳಿಗೆ ವಿಮಾನಯಾನ ಸೇವೆ ಸ್ಥಗಿತಗೊಳಿಸಿದ ಭಾರತೀಯ ವಿಮಾನಯಾನ ಸಂಸ್ಥೆಗಳು

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಪಾಕಿಸ್ತಾನ ವಿರುದ್ಧ ಟಾಸ್ ಗೆದ್ದ ಶ್ರೀಲಂಕಾ ಫೀಲ್ಡಿಂಗ್ ಆಯ್ಕೆ

**<><><*><><<>**

ಗುಜರಾತ್‌ನ ಸನಂದ್‌ನಲ್ಲಿರುವ ಮೈಕ್ರೋನ್ ಸೆಮಿಕಂಡಕ್ಟರ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ ಸೆಮಿಕಂಡಕ್ಟರ್ ಅಳವಡಿಕೆ, ಪರೀಕ್ಷೆ ಮತ್ತು ಪ್ಯಾಕೇಜಿಂಗ್ ಸೌಲಭ್ಯವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಇದು ಭಾರತದ ಸೆಮಿಕಂಡಕ್ಟರ್ ಉತ್ಪಾದನಾ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲನ್ನು ಗುರುತಿಸುತ್ತದೆ. ಭಾರತದಲ್ಲಿ ತಯಾರಿಸಿದ ಮೊದಲ ಸೆಮಿಕಂಡಕ್ಟರ್ ಮೆಮೊರಿ ಮಾಡ್ಯೂಲ್‌ಗಳ ವಾಣಿಜ್ಯ ಉತ್ಪಾದನೆ ಮತ್ತು ಸಾಗಣೆಯನ್ನು ಇಲ್ಲಿ ಪ್ರಾರಂಭಿಸಲಾಗಿದೆ. ಜಾಗತಿಕ ಸೆಮಿಕಂಡಕ್ಟರ್ ಮೌಲ್ಯ ಸರಪಳಿಯಲ್ಲಿ ಭಾರತದ ಸ್ಥಾನವನ್ನು ಬಲಪಡಿಸುವಲ್ಲಿ ಈ ಬೆಳವಣಿಗೆಯು ಒಂದು ಪ್ರಮುಖ ಹೆಜ್ಜೆಯನ್ನು ಪ್ರತಿನಿಧಿಸುತ್ತದೆ. ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತದಲ್ಲಿ ಆಯೋಜಿಸಲಾದ ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಯು ತನ್ನ ಎಐ ಸಾಮರ್ಥ್ಯದೊಂದಿಗೆ ಜಗತ್ತಿಗೆ ಪರಿಚಯಿಸಿತು ಎಂದು ಹೇಳಿದರು. ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಸೆಮಿಕಂಡಕ್ಟರ್ ವಲಯದಲ್ಲಿ ಭಾರತವು ಜಾಗತಿಕ ನಕ್ಷೆಯಲ್ಲಿ ತನ್ನ ಸ್ಥಾನವನ್ನು ಸ್ಥಾಪಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಎಲೆಕ್ಟ್ರಾನಿಕ್ಸ್ ಉತ್ಪಾದನೆಯು ಆರು

ಪಟ್ಟು ಬೆಳವಣಿಗೆಯನ್ನು ದಾಖಲಿಸಿದೆ ಮತ್ತು ಎಲೆಕ್ಟ್ರಾನಿಕ್ಸ್ ರಫ್ತು ೮ ಪಟ್ಟು ಬೆಳವಣಿಗೆಯನ್ನು ದಾಖಲಿಸಿದೆ. ಮೊಬೈಲ್ ಫೋನ್‌ಗಳು ಈಗ ದೇಶದ ಪ್ರಮುಖ ರಫ್ತು ವಸ್ತುಗಳಲ್ಲಿ ಒಂದಾಗಿದೆ ಎಂದು ತಿಳಿಸಿದರು.

<><><*><><<>

ಸಶಸ್ತ್ರ ಪಡೆಗಳ ಸಿಬ್ಬಂದಿಯ ನಿವೃತ್ತಿ ವಯಸ್ಸು ಮತ್ತು ಸೇವಾ ಪರಿಸ್ಥಿತಿಗಳಿಗೆ ಸಂಬಂಧಿಸಿದಂತೆ ಬ್ರಿಟಿಷರ ಕಾಲದ ಹಳೆಯ ಮಾನದಂಡಗಳನ್ನು ಅನುಸರಿಸದಂತೆ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಸೂಚಿಸಿದೆ. ಭಾರತೀಯ ಕರಾವಳಿ ಕಾವಲು ಪಡೆಯ ಎಲ್ಲಾ ಶ್ರೇಣಿಯ ಅಧಿಕಾರಿಗಳ ನಿವೃತ್ತಿ ವಯಸ್ಸನ್ನು ೬೦ ವರ್ಷಕ್ಕೆ ನಿಗದಿಪಡಿಸಿದ್ದ ದೆಹಲಿ ಹೈಕೋರ್ಟ್‌ನ ಆದೇಶಕ್ಕೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜಾಯ್ಮಾಲ್ಯ ಬಾಗ್ಚಿ ನ್ಯಾಯಪೀಠ ತಡೆಯಾಜ್ಞೆ ನೀಡಿದೆ. ಅತ್ಯಂತ ನೈಪುಣ್ಯ ಹೊಂದಿರುವ ಕರಾವಳಿ ಕಾವಲು ಪಡೆಯ ಅಧಿಕಾರಿಗಳ ಸೇವಾ ನಿಯಮಗಳನ್ನು ಮರುಪರಿಶೀಲಿಸಲು ತಜ್ಞರ ಸಮಿತಿಯನ್ನು ರಚಿಸುವಂತೆ ಸುಪ್ರೀಂ ಕೋರ್ಟ್ ಸಲಹೆ ನೀಡಿದೆ. ಆಧುನಿಕ ಅಗತ್ಯತೆಗಳಿಗೆ ತಕ್ಕಂತೆ ಸೇವಾ ನಿಯಮಗಳಲ್ಲಿ ಬದಲಾವಣೆ ತರುವ ಅಗತ್ಯವನ್ನು ನ್ಯಾಯಾಲಯ ಪ್ರತಿಪಾದಿಸಿದೆ.

<><><*><><<>

ಇಸ್ರೇಲ್ ಮತ್ತು ಇರಾನ್ ನಡುವಿನ ಬಿಕ್ಕಟ್ಟಿನಿಂದ ಉಭಯ ರಾಷ್ಟ್ರಗಳಲ್ಲಿ ಆತಂಕ ಎದುರಾಗಿದೆ. ಈ ಹಿನ್ನೆಲೆಯಲ್ಲಿ ರಾಜಧಾನಿ ಟೆಹ್ರಾನ್‌ನಿಂದ ಹೊರಹೋಗುವಂತೆ ಅಲ್ಲಿನ ನಿವಾಸಿಗಳಿಗೆ ಇರಾನ್‌ನ ರಾಷ್ಟ್ರೀಯ ಭದ್ರತಾ ಮಂಡಳಿ ಸೂಚಿಸಿದೆ. ಈ ನಡುವೆ ಮಧ್ಯಪ್ರಾಚ್ಯದಲ್ಲಿರುವ ಎಲ್ಲಾ ಇಸ್ರೇಲ್ ಮತ್ತು ಅಮೆರಿಕದ ಮಿಲಿಟರಿ ನೆಲೆಗಳು, ಇರಾನಿನ ಕ್ಷಿಪಣಿಗಳ ಪ್ರಬಲ ದಾಳಿಗೆ ತುತ್ತಾಗಿವೆ ಎಂದು ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ತಿಳಿಸಿದೆ. ಕತಾರ್‌ನಲ್ಲಿರುವ ಅಲ್-ಉದೈದ್ ವಾಯುನೆಲೆ, ಕುವೈತ್‌ನಲ್ಲಿರುವ ಅಲ್-ಸೇಲಂ ವಾಯುನೆಲೆ, ಯುಎಇ ಯ ಅಲ್-ಧಾಫ್ರಾ ವಾಯುನೆಲೆ, ಬಹ್ರೇನ್‌ನಲ್ಲಿರುವ ಅಮೆರಿಕದ ಐದನೇ ವಾಯುನೆಲೆಯನ್ನು ಗುರಿಯಾಗಿಸಿಕೊಂಡು ಇರಾನ್ ದಾಳಿ ನಡೆಸಿದೆ.

<><><*><><<>

ಇಸ್ರೇಲ್‌ನಲ್ಲಿ ಹದಗೆಡುತ್ತಿರುವ ಭದ್ರತಾ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಅಲ್ಲಿ ನೆಲೆಸಿರುವ ಭಾರತೀಯ ನಾಗರಿಕರಿಗೆ ಭಾರತ ಸರ್ಕಾರ ಅತ್ಯಂತ ತುರ್ತು ಸುರಕ್ಷತಾ ಸಲಹೆಯನ್ನು ನೀಡಿದೆ. ಈ ಪ್ರದೇಶದಲ್ಲಿನ ಉದ್ವಿಗ್ನತೆಯ ಕಾರಣದಿಂದಾಗಿ ಪ್ರತಿಯೊಬ್ಬ ಭಾರತೀಯರು ಸದಾ ಜಾಗರೂಕರಾಗಿರಬೇಕು ಮತ್ತು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಲಾಗಿದೆ. ಇಸ್ರೇಲ್‌ನ ಅಧಿಕಾರಿಗಳು ಹಾಗೂ 'ಹೋಮ್ ಫ್ರಂಟ್ ಕಮಾಂಡ್' ನೀಡಿರುವ ಸುರಕ್ಷತಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಟೆಲ್ ಅವೀವ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಕೋರಿದೆ. ಭಾರತೀಯ ನಾಗರಿಕರು ತಮ್ಮ ವಾಸಸ್ಥಳ ಅಥವಾ ಕೆಲಸದ ಸ್ಥಳದ ಸಮೀಪವಿರುವ ಅಧಿಕೃತ ಆಶ್ರಯ ತಾಣಗಳ ಬಗ್ಗೆ ಮಾಹಿತಿ ಹೊಂದಿರಬೇಕು ಮತ್ತು ತುರ್ತು ಸಂದರ್ಭದಲ್ಲಿ ಅವುಗಳಿಗೆ ತಲುಪುವಷ್ಟು ಹತ್ತಿರದಲ್ಲಿರಬೇಕು ಎಂದು ಸಲಹೆ ನೀಡಲಾಗಿದೆ. ಯಾವುದೇ ತುರ್ತು ಪರಿಸ್ಥಿತಿಯಲ್ಲಿ ನೆರವಿಗಾಗಿ ಭಾರತೀಯ ರಾಯಭಾರ ಕಚೇರಿಯ ಸಹಾಯವಾಣಿ ಸಂಖ್ಯೆ +೯೭೨-೫೪-೭೫೨೦೭೧೧ ಅಥವಾ ಇಮೇಲ್ ಛಿoಟs೧.ಣeಟಚಿviv@meಚಿ.gov.iಟಿ ಮೂಲಕ ಸಂಪರ್ಕಿಸಬಹುದು ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

<>><><*><><<>

ಇಸ್ರೇಲ್ ಮತ್ತು ಇರಾನ್ ನಡುವೆ ಉದ್ವಿಗ್ನ ಪರಿಸ್ಥಿತಿ ಎದುರಾಗಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಏರ್ ಇಂಡಿಯಾ ವಿಮಾನಯಾನ ಸಂಸ್ಥೆಯು ಆ ಭಾಗದ ಎಲ್ಲಾ ನಗರಗಳಿಗೆ ತನ್ನ ವಿಮಾನ ಸಂಚಾರವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಗಿತಗೊಳಿಸಿದೆ. ಪ್ರಯಾಣಿಕರು ಮತ್ತು ವಿಮಾನ ಸಿಬ್ಬಂದಿಯ ಸುರಕ್ಷತೆಗೆ ಮೊದಲ ಆದ್ಯತೆ ನೀಡುಲಾಗುತ್ತಿದ್ದು, ಪ್ರಸ್ತುತ ಅಲ್ಲಿನ ಭದ್ರತಾ ಸನ್ನಿವೇಶವನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ. ಪರಿಸ್ಥಿತಿಗೆ ಅನುಗುಣವಾಗಿ ವಿಮಾನ ಕಾರ್ಯಾಚರಣೆಯ ಬಗ್ಗೆ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ಏರ್ ಇಂಡಿಯಾ ತಿಳಿಸಿದೆ. ಪ್ರಯಾಣಿಕರು ತಮ್ಮ ವಿಮಾನದ ಇತ್ತೀಚಿನ ಸ್ಥಿತಿಗತಿಯನ್ನು ತಿಳಿಯಲು ಏರ್ ಇಂಡಿಯಾದ ಅಧಿಕೃತ ವೆಬ್‌ಸೈಟ್ www.airindia.com ವೀಕ್ಷಿಸಬಹುದು ಅಥವಾ ದಿನದ ೨೪ ಗಂಟೆ ಕಾರ್ಯನಿರ್ವಹಿಸುವ ಸಹಾಯವಾಣಿ ಸಂಖ್ಯೆ +೯೧ ೧೧೬೯೩-೨೯೩೩೩ ಮತ್ತು +೯೧ ೧೧೬೯೩-೨೯೯೯೯ ಅನ್ನು ಸಂಪರ್ಕಿಸಬಹುದು ಎಂದು ಸಂಸ್ಥೆ ಮನವಿ ಮಾಡಿದೆ.

<>><><*><><<>

ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ತೀವ್ರಗೊಂಡಿರುವ ಹಿನ್ನೆಲೆಯಲ್ಲಿ, ಪ್ರಮುಖ ವಿಮಾನಯಾನ ಸಂಸ್ಥೆಯಾದ ಇಂಡಿಗೋ ಮಧ್ಯಪ್ರಾಚ್ಯದ ವಿವಿಧ ನಗರಗಳಿಗೆ ಸಂಚರಿಸುವ ತನ್ನ ಎಲ್ಲಾ ವಿಮಾನಗಳನ್ನು ಇಂದು ಮಧ್ಯರಾತ್ರಿಯವರೆಗೆ ರದ್ದುಗೊಳಿಸಿದೆ. ಇರಾನ್ ಸೇರಿದಂತೆ ಈ ಭಾಗದ ದೇಶಗಳಲ್ಲಿ ವೈಮಾನಿಕ ನಿರ್ಬಂಧಗಳು ಹೆಚ್ಚಾಗುತ್ತಿರುವುದರಿಂದ ಪ್ರಯಾಣಿಕರ ಸುರಕ್ಷತೆಯ ಹಿತದೃಷ್ಟಿಯಿಂದ ಈ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗಿದೆ. ವಿಮಾನ ರದ್ದತಿಯಿಂದ ಸಂಕಷ್ಟಕ್ಕೆ ಸಿಲುಕಿರುವ ಪ್ರಯಾಣಿಕರು ಪರ್ಯಾಯ ಪ್ರಯಾಣದ ಆಯ್ಕೆಗಳನ್ನು ಪರಿಶೀಲಿಸಬಹುದು ಅಥವಾ ಪೂರ್ಣ ಪ್ರಮಾಣದ ಮರುಪಾವತಿಯನ್ನು ಪಡೆಯಲು ಅವಕಾಶ ನೀಡಲಾಗಿದೆ. ಪ್ರಯಾಣಿಕರು ವಿಮಾನ ನಿಲ್ದಾಣಕ್ಕೆ ತೆರಳುವ ಮುನ್ನ ಅಧಿಕೃತ ವೆಬ್‌ಸೈಟ್ ಮೂಲಕ ತಮ್ಮ ವಿಮಾನದ ಸ್ಥಿತಿಗತಿಯನ್ನು ಖಚಿತಪಡಿಸಿಕೊಳ್ಳುವಂತೆ ವಿಮಾನಯಾನ ಸಂಸ್ಥೆ ಮಾಹಿತಿ ನೀಡಿದೆ.

<>><><*><><<>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ದೆಹಲಿಯಲ್ಲಿ ಭಾರತ-ಐರೋಪ್ಯ ಒಕ್ಕೂಟ ಸಂಬಂಧಗಳ ಕುರಿತು ಸಮಾಲೋಚನಾ ಸಮಿತಿ ಸಭೆ ನಡೆಸಿದರು. ವ್ಯಾಪಾರ, ತಂತ್ರಜ್ಞಾನ, ಭದ್ರತೆ ಮತ್ತು ಚಲನಶೀಲತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಭಾರತ-ಐರೋಪ್ಯ ಒಕ್ಕೂಟದ ಪಾಲುದಾರಿಕೆಯ ಪರಸ್ಪರ ಪ್ರಯೋಜನಕಾರಿ ಅಂಶಗಳ ಕುರಿತು ಚರ್ಚಿಸಲಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

<>><><*><><<>

ದೇಶಾದ್ಯಂತ ಹೆಚ್ಚುತ್ತಿರುವ ಬಾಕಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕಾನೂನು ವ್ಯವಹಾರಗಳ ಇಲಾಖೆಯು, ಪೂರ್ವಭಾವಿ ಕ್ರಮಗಳನ್ನು ಕೈಗೊಂಡಿದೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಕಾನೂನು ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಸುಪ್ರೀಂ ಕೋರ್ಟ್, ಹೈಕೋರ್ಟ್‌ಗಳು, ಜಿಲ್ಲಾ ನ್ಯಾಯಾಲಯಗಳು ಮತ್ತು ವಿವಿಧ ನ್ಯಾಯಮಂಡಳಿಗಳು ಸೇರಿದಂತೆ ನ್ಯಾಯಾಂಗದ ಪ್ರತಿಯೊಂದು ಹಂತದಲ್ಲೂ ಬಾಕಿ ಪ್ರಕರಣಗಳ ವಿಲೇವಾರಿ ಅತ್ಯಗತ್ಯವಾಗಿದೆ ಎಂದರು.

<>><><*><><<>

ಆಂಧ್ರಪ್ರದೇಶದ ಕಾಕಿನಾಡ ಜಿಲ್ಲೆಯ ಪಟಾಕಿ ಕಾರ್ಖಾನೆಯಲ್ಲಿ ಸಂಭವಿಸಿದ ಸ್ಫೋಟದಲ್ಲಿ ಜೀವಹಾನಿ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ದುಃಖ ವ್ಯಕ್ತಪಡಿಸಿದ್ದಾರೆ. ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತರ ಸಂಬಂಧಿಕರಿಗೆ ತಲಾ ಎರಡು ಲಕ್ಷ ರೂಪಾಯಿ ಹಾಗೂ ಗಾಯಾಳುಗಳಿಗೆ ತಲಾ ಐವತ್ತು ಸಾವಿರ ರೂಪಾಯಿಗಳನ್ನು ಪರಿಹಾರವನ್ನು ಪ್ರಧಾನಿ ಘೋಷಿಸಿದ್ದಾರೆ.

<>><><*><><<>

ಶ್ರೀಲಂಕಾದ ಪಲ್ಲೆಕೆಲೆ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ೮ರ ಹಂತದ ಗುಂಪು-೨ರ ಪಂದ್ಯದಲ್ಲಿ ಶ್ರೀಲಂಕಾ ಹಾಗೂ ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಶ್ರೀಲಂಕಾ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಪಾಕಿಸ್ತಾನ ೮ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೆ ೭೮ ರನ್ ಮಾಡಿ ಆಡುತ್ತಿದೆ.

<>><><*><><<>

ಕರ್ನಾಟಕದ ಹುಬ್ಬಳ್ಳಿಯ ಕೆಎಸ್‌ಸಿಎ ಕ್ರೀಡಾಂಗಣದಲ್ಲಿ ನಡೆದ ರಣಜಿ ಟ್ರೋಫಿ ಫೈನಲ್ ಹಣಾಹಣಿಯಲ್ಲಿ ಪಂದ್ಯದ ೫ನೇ ದಿನವು ಜಮ್ಮು-ಕಾಶ್ಮೀರ ತಂಡ ಉತ್ತಮ ಬ್ಯಾಟಿಂಗ್ ಮೂಲಕ ಪಂದ್ಯವನ್ನು ಡ್ರಾ ಮಾಡಿಕೊಂಡಿದೆ. ರಣಜಿ ನಿಯಮಗಳ ಪ್ರಕಾರ ಮೊದಲ ಇನ್ನಿಂಗ್ಸ್‌ನಲ್ಲಿ ಮುನ್ನಡೆ ಪಡೆದ ಜಮ್ಮು-ಕಾಶ್ಮೀರ ತಂಡವನ್ನು ವಿಜೇತ ತಂಡವೆಂದು ಘೋಷಿಸಲಾಗಿದೆ. ಈ ಮೂಲಕ ಹುಬ್ಬಳ್ಳಿಯ ಮೈದಾನದಲ್ಲಿ ಜಮ್ಮು-ಕಾಶ್ಮೀರ ಇತಿಹಾಸ ಸೃಷ್ಟಿಸಿದೆ. ಮೊದಲ ಬಾರಿಗೆ ಫೈನಲ್‌ಗೇರಿದ ಜಮ್ಮು-ಕಾಶ್ಮೀರ ಬಲಿಷ್ಠ ಕರ್ನಾಟಕವನ್ನು ಮಣಿಸಿ ಚಾಂಪಿಯನ್ ಪಟ್ಟಕ್ಕೇರಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಜಮ್ಮು-ಕಾಶ್ಮೀರ ತಂಡವು ಮೊದಲ ಇನ್ನಿಂಗ್ಸ್‌ನಲ್ಲಿ ೫೮೪ ರನ್‌ಗಳ ಬೃಹತ್ ಮೊತ್ತ ಕಲೆ ಹಾಕಿತು. ಇದಕ್ಕೆ ಉತ್ತರವಾಗಿ ಕರ್ನಾಟಕ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ ೨೯೩ ರನ್‌ಗಳಿಸಿತು. ಎರಡನೇ ಇನ್ನಿಂಗ್ಸ್‌ನಲ್ಲಿ ಜಮ್ಮು-ಕಾಶ್ಮೀರ ಬ್ಯಾಟರ್‌ಗಳು ಅದ್ಭುತ ಪ್ರದರ್ಶನ ನೀಡಿ ಪಂದ್ಯವನ್ನು ಡ್ರಾದಲ್ಲಿ ಅಂತ್ಯಗೊಳಿಸಿದರು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>